ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ,

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ಕ್ಷೇತ್ರ ಶಿಕ್ಷಣಾಧಿಕಾರಿಗಳು
ಪೂರ್ವವಲಯ ಬಳ್ಳಾರಿ

ದಿನಾಂಕ: 17-Mar-2025

[ನಿಯಮ 3 ಉಪನಿಯಮ 5(ಬಿ)]
ಪ್ರಮಾಣ ಪತ್ರ ಸಂಖ್ಯೆ: 393866/2020-21

SRI SARASWATHI EDUCATION SOCIETY BALLARI

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸಕ್ಷನ್ 31ರಂತೆ ಈ ಕೆಳಕಂಡ NANDI SCHOOL OF EXCELLENCE ( WARD NO 19, INTURI NAGARA, RAGHAVENDRA COLONY, BALLARI ) ಪೂರ್ವ-ಪ್ರಾಥಮಿಕ(Pre-Primary)

1. ಅರ್ಜಿ ಸಂಖ್ಯೆ : PP11684
2. ಕ್ರಮ ಸಂಖ್ಯೆ : 393866
3. ಶಾಲೆಯ ಹೆಸರು ಮತ್ತು ವಿಳಾಸ : NANDI SCHOOL OF EXCELLENCE (WARD NO 19, INTURI NAGARA, RAGHAVENDRA COLONY, BALLARI)
4. ಅನುಮತಿ ನೀಡಿದ ತರಗತಿ : Pre primary
5. ಶೈಕ್ಷಣಿಕ ವರ್ಷ : 2025-2026

| Sr No | Standard | Medium |
|---|---|---|

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ :_____/_____/_____

ಷರತ್ತುಗಳು

1. ಈ ನೋಂದಾವಣಿಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.

2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.

5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

6. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

7. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

8. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

Scanned with OKEN Scanner

9. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

10. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

11. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

12. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

13. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

14. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007ರ ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

15. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ, ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

16. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

17. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

18. ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡಿದ ದಾಖಲೆಗಳು ನೈಜತೆಯಿಂದ ಕೂಡಿರದಿದ್ದಲ್ಲಿ ಈ ಆದೇಶವು ತಂತಾನೆ ರದ್ದಾಗುತ್ತದೆ.

19. ಪ್ರಥಮ ಮಾನ್ಯತೆಗಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದು. ಕ್ಷೇತ್ರಶಿಕ್ಷಣಾಧಿಕಾರಿಗಳು ಶಿಕ್ಷಣ ಕಾಯ್ದೆ 1983 ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007ರ ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

20. ಆಡಳಿತ ಮಂಡಳಿಯು ತಪ್ಪು ಮಾಹಿತಿ/ ನಕಲಿ ದಾಖಲೆಗಳನ್ನು ನೀಡಿ ನೊಂದಣಿಯನ್ನು ಪಡೆದಿದ್ದು ಸಾಬೀತಾದಲ್ಲಿ ಸದರಿ ನೋಂದಣಿಯನ್ನು ಹಿಂಪಡೆದು ಆಡಳಿತ ಮಂಡಳಿ ವಿರುದ್ಧ ಕ್ರಿಮಿನಲ್ ಮೊಕ್ಕದಮೆ ದಾಖಲಿಸಲು ಕ್ರಮವಹಿಸುವುದು ಹಾಗೂ ಆಡಳಿತ ಮಂಡಳಿಗೆ ಆರ್.ಟಿ.ಇ ನಿಯಮದಡಿಯಲ್ಲಿ 10 ಲಕ್ಷದ ವರೆಗೆ ದಂಡನೆಯನ್ನು ವಿಧಿಸುವುದು.

21. ಸರ್ಕಾರದ ಅಧಿದೂಚನೆ ಸಂಖ್ಯೆ:ಇಡಿ 709 ಪಿ.ಜಿ.ಸಿ 2017 ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಕ್ಷೇತ್ರ ಶಿಕ್ಷಣಾಧಿಕಾರಿಗಳು,
ಸಾರ್ವಜನಿಕ ಶಿಕ್ಷಣ ಇಲಾಖೆ,
18/3/25

1. ಕಾರ್ಯದರ್ಶಿಗಳು, NANDI SCHOOL OF EXCELLENCE (WARD NO 19, INTURI NAGARA, RAGHAVENDRA COLONY, BALLARI)

2. ಕಛೇರಿ ಪ್ರತಿ.

Scanned with OKEN Scanner